# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 347 |
| ಉತ್ತರಿಸಬೇಕಾದ ದಿನಾಂಕ | : | 14.09.2021 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸಹಕಾರಿ ಕಾಯ್ದೆಯಡಿಯಲ್ಲಿ ಬರತಕ್ಕಂತಹ ಎಲ್ಲಾ ರೀತಿಯ ಸಂಘ, ಕ್ಲಬ್, ಸಂಸ್ಥೆಗಳಲ್ಲಿ ಚುನಾಯಿತ ಅಧ್ಯಕ್ಷ ಹಾಗೂ ಇತರೆ ಪದಾಧಿಕಾರಿಗಳ ಆಯ್ಕೆಯಲ್ಲಿ ಎಲ್ಲಾ ಜನಾಂಗದ ಸದಸ್ಯರಿಗೆ ಮೀಸಲಾತಿ ಕಲ್ಪಿಸಲಾಗಿದೆಯೇ: (ವಿವರ ನೀಡುವುದು) | ರಾಜ್ಯದ ಸಹಕಾರಿ ಕಾಯ್ದೆಯಡಿಯಲ್ಲಿ ಸಂಘ, ಕ್ಲಬ್, ಸಂಸ್ಥೆಗಳು ನೊಂದಾಯಿಸಿರುವುದಿಲ್ಲ.<br><br>ಆದರೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರಡಿ ಸಂಘ, ಕ್ಲಬ್, ಸಂಸ್ಥೆಗಳು ನೊಂದಾಯಿಸಲಾಗುತ್ತದೆ. ಈ ಕಾಯ್ದೆ ಯಡಿಯಲ್ಲಿ ಚುನಾಯಿತ ಅಧ್ಯಕ್ಷ ಮತ್ತು ಇತರೆ ಪದಾಧಿಕಾರಿಗಳ ಆಯ್ಕೆಯಲ್ಲಿ ಮೀಸಲಾತಿಗೆ ಅವಕಾಶವಿರುವುದಿಲ್ಲ. |
| ಆ) | ಇಲ್ಲದಿದ್ದಲ್ಲಿ, ಮೀಸಲಾತಿ ಕಲ್ಪಿಸಲು ಇರುವ ಸರ್ಕಾರದ ಮಾರ್ಗಸೂಚಿಗಳು ಹಾಗೂ ಮಾನದಂಡಗಳೇನು; (ವಿವರ ನೀಡುವುದು) | ಮೀಸಲಾತಿ ಕಲ್ಪಿಸಲು ಸರ್ಕಾರದ ಮಾರ್ಗಸೂಚಿಗಳು ಹಾಗೂ ಮಾನದಂಡಗಳು ಇರುವುದಿಲ್ಲ. |
| ಇ) | ಯಾವುದಾದರೂ ಸಂಘ, ಕ್ಲಬ್, ಸಂಸ್ಥೆಗಳಲ್ಲಿ ಮೀಸಲಾತಿ ಮಾನದಂಡಗಳನ್ನು ಉಲ್ಲಂಘನೆ ಮಾಡಿರುವ ಪ್ರಕರಣಗಳು ದಾಖಲಾಗಿದೆಯೇ; ಹಾಗಿದ್ದಲ್ಲಿ, ಜಿಲ್ಲಾವಾರು ಪ್ರಕರಣಗಳ ವಿವರಗಳನ್ನು ನೀಡುವುದು; | ಅನ್ವಯಿಸುವುದಿಲ್ಲ |
| ಈ) | ದಾಖಲಾದ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳನ್ನು ಸಮರ್ಪಕವಾಗಿ ಸರಿಪಡಿಸಲಾಗಿದೆ; (ವಿವರ ನೀಡುವುದು) | ಅನ್ವಯಿಸುವುದಿಲ್ಲ |
| ಉ) | ಬಾಕಿ ಉಳಿದ ಪ್ರಕರಣಗಳ ಕುರಿತು ಸರ್ಕಾರದ ಕ್ರಮವೇನು? (ವಿವರ ನೀಡುವುದು) | ಅನ್ವಯಿಸುವುದಿಲ್ಲ |

**ಸಿಒ 80 ಸಿಎಲ್ಎಮ್ 2021 (ಇ)**

(signature)

**(ಎಸ್.ಟಿ.ಸೋಮಶೇಖರ್)**
**ಸಹಕಾರ ಸಚಿವರು**